159

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಅರುಣ ಶಹಾಪುರ ಇವರು ನಿಯಮ 72 ರ ಮೇರೆಗೆ ನೀಡಿರುವ ಸೂಚನಾ ಪತ್ರಕ್ಕೆ ಮಾನ್ಯ ಉಪ ಮುಖ್ಯಮಂತ್ರಿ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಹೇಳಿಕೆ**

| | |
|---|---|
| **ವಿಷಯ:** | ಅನುದಾನಿತ ಖಾಸಗಿ ಐ.ಟಿ.ಐ ಸಿಬ್ಬಂದಿಗಳಿಗೆ ಪಿಂಚಣಿ ನೀತಿಯನ್ನು 29/12/2014 ರಿಂದ ಭವಿಷ್ಯಾವರ್ತಿಯಾಗಿ ಜಾರಿಗೊಳಿಸಿರುವ ಆದೇಶವನ್ನು ಪೂರ್ವಾನ್ವಯವಾಗುವಂತೆ ಅನ್ವಯಿಸಿ ಜಾರಿಗೊಳಿಸುವ ಕುರಿತು ಮಾನ್ಯ ಉಪ ಮುಖ್ಯಮಂತ್ರಿಯವರು ಹಾಗೂ ಉನ್ನತ ಶಿಕ್ಷಣ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯಬಯಸುತ್ತೇನೆ. |

* * *

ರಾಜ್ಯದ ಖಾಸಗಿ ಅನುದಾನಿತ **ಶಿಕ್ಷಣ ಸಂಸ್ಥೆಯ** ನೌಕರರಿಗೆ ಇರುವಂತೆ ಅನುದಾನಿತ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಯ ಸಿಬ್ಬಂದಿಗಳಿಗೆ ಮೂಲ ವೇತನ, ತುಟ್ಟಿ ಭತ್ಯೆ, ಮನೆ ಬಾಡಿಗೆ ಭತ್ಯೆ, ನಗರ ಪರಿಹಾರ ಭತ್ಯೆ, ವಾರ್ಷಿಕ ವೇತನ ಬಡ್ತಿ, ಗಳಿಕೆ ರಜೆ ನಗದೀಕರಣ, 10 ವರ್ಷಗಳ ಕಾಲಬದ್ಧ ವೇತನ ಮುಂಬಡ್ತಿ, 15 ವರ್ಷಗಳ ಸ್ವಯಂಚಾಲಿತ ವೇತನ ಮುಂಬಡ್ತಿ, 20–25 ವರ್ಷಗಳ ಹೆಚ್ಚುವರಿ ವೇತನ ಬಡ್ತಿ, ಪಿಂಚಣಿ, ಕುಟುಂಬ ಪಿಂಚಣಿ, ಗ್ರ್ಯಾಚ್ಯುಯಿಟಿ(ನಿವೃತ್ತಿ ಉಪದಾನ) / ಡಿ.ಸಿ.ಆರ್.ಜಿ ಮರಣ ಉಪದಾನ, ಗಳಿಕೆ ರಜೆ ನಗದೀಕರಣ (ನಿವೃತ್ತಿ ನಂತರ), ಪರಿವರ್ತಿತ ಪಿಂಚಣಿ ಮೌಲ್ಯ ಹಾಗೂ ಇತರೆ ಸೇವಾ ಸೌಲಭ್ಯಗಳನ್ನು ವಿಸ್ತರಿಸಿ, ಖಾಸಗಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ ಅನುಷ್ಠಾನಗೊಳಿಸಲು ಸಚಿವ ಸಂಪುಟದ ಅನುಮೋದನೆಯಂತೆ ಸರ್ಕಾರಿ ಆದೇಶ ಸಂಖ್ಯೆ ಕಾಇ 303 ಇಟಿಐ 2014 ದಿನಾಂಕ 29.12.2014 ಹಾಗೂ ದಿನಾಂಕ:14.11.2016 ರಲ್ಲಿ ಆದೇಶವನ್ನು ಹೊರಡಿಸಲಾಗಿರುತ್ತದೆ.

ಖಾಸಗಿ ಅನುದಾನಿತ **ಶಿಕ್ಷಣ ಸಂಸ್ಥೆಗಳ** ಸಿಬ್ಬಂದಿಗಳಿಗೆ ಇರುವಂತೆ ಪಿಂಚಣಿ, ಗ್ರ್ಯಾಚ್ಯುಯಿಟಿ, ಸೇವಾ ಸೌಲಭ್ಯಗಳು ಮತ್ತು ಸೇವಾ ನಿಯಮಗಳನ್ನು ಖಾಸಗಿ ಅನುದಾನಿತ ತರಬೇತಿ ಸಂಸ್ಥೆಗಳ ಸಿಬ್ಬಂದಿಗಳಿಗೂ ಸಹ ವಿಸ್ತರಿಸುವ ಪ್ರೊ॥ ಪಿ.ಎಸ್.ಎಸ್. ಥಾಮಸ್ ಸಮಿತಿಯ ಶಿಫಾರಸ್ಸನ್ನು ಸಚಿವ ಸಂಪುಟದ ಉಪ ಸಮಿತಿಯು ನಿರ್ಣಯಿಸಿರುವಂತೆ ಆರ್ಥಿಕ ಹೊರೆಯನ್ನು ಗಮನದಲ್ಲಿಟ್ಟುಕೊಂಡು ವೇತನ ಮತ್ತು ಇತರೆ ಭತ್ಯೆಗಳನ್ನು ಪರಿಶೀಲಿಸಿ ಅರ್ಹ ಸಿಬ್ಬಂದಿಗಳಿಗೆ ಭವಿಷ್ಯಾವರ್ತಿಯಾಗಿ ನೀಡಲು ಸಚಿವ ಸಂಪುಟವು ನಿರ್ಣಯಿಸಿದೆ.

ಸದರಿ ಪ್ರಸ್ತಾವನೆಗೆ ಉಂಟಾಗಬಹುದಾದ ಒಟ್ಟಾರೆ ಆರ್ಥಿಕ ಹೊರೆಯನ್ನು ಪರಿಶೀಲಿಸಿ ಸಚಿವ ಸಂಪುಟವು ಅನುದಾನಿತ ಖಾಸಗಿ ಐ.ಟಿ.ಐ ಸಿಬ್ಬಂದಿಗಳಿಗೆ ಪಿಂಚಣಿ ನೀತಿಯನ್ನು ಭವಿಷ್ಯಾವರ್ತಿಯಾಗಿ ನೀಡಲು ನಿರ್ಣಯಿಸಿರುವುದರಿಂದ ಪೂರ್ವಾನ್ವಯವಾಗಿ ಜಾರಿಗೊಳಿಸಲು ಸಾಧ್ಯವಾಗುವುದಿಲ್ಲ.

**ಕೌಉಜೀಇ 34 ಕೈತಪ್ರ 2020**

(ಡಾ.ಸಿ.ಎನ್.ಅಶ್ವತ್ಥ ನಾರಾಯಣ)
ಉಪ ಮುಖ್ಯಮಂತ್ರಿಗಳು ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು